# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 19 (350) |
| ಸದಸ್ಯರ ಹೆಸರು | : | ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14-09-2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪುರಸಭೆಗಳಿಗೆ ಸರ್ಕಾರದಿಂದ ಅನುದಾನಗಳು ಸಮರ್ಪಕವಾಗಿ ಬಾರದಿರುವುದರಿಂದ ಪುರಸಭೆಯಿಂದ ಸಾರ್ವಜನಿಕರಿಗೆ ಆಗಬೇಕಾದ ಕೆಲಸ ಕಾರ್ಯಗಳಾಗದೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ಪುರಸಭೆಗಳಿಗೆ ಸರ್ಕಾರದ ವಿವಿಧ ಯೋಜನೆಗಳಾದ ಎಸ್.ಎಫ್.ಸಿ ಮುಕ್ತನಿಧಿ ಅನುದಾನ, ಎಸ್.ಎಫ್.ಸಿ ಕುಡಿಯುವ ನೀರು ಅನುದಾನ ಹಾಗೂ ಎಸ್.ಎಫ್.ಸಿ ವಿಶೇಷ ಅನುದಾನ, ಸ್ವಚ್ಛ ಭಾರತ ಯೋಜನೆ, 14ನೇ ಮತ್ತು 15ನೇ ಹಣಕಾಸು ಆಯೋಗದ ಅನುದಾನ ಹಾಗೂ ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿಯಲ್ಲಿ ಯೋಜನೆಯ ಮಾರ್ಗಸೂಚಿಯಂತೆ ಪುರಸಭೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗಲು ಮೂಲಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಬಿಡುಗಡೆಗೊಳಿಸಲಾಗಿದೆ. ಪುರಸಭೆಗಳಿಗೆ ಲಭ್ಯವಿರುವ ಅನುದಾನದಲ್ಲಿ ಅನುದಾನ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. |
| ಆ) | ಪುರಸಭೆಗಳಲ್ಲಿ ಅನುದಾನದ ಕೊರತೆಯಿಂದ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುತ್ತಿದ್ದು, ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗುವುದೇ; | ಪುರಸಭೆಗಳ ವಾರ್ಡ್ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆಗೊಳಿಸಲಾಗುವುದಿಲ್ಲ. ಪುರಸಭೆಗಳಿಗೆ ಲಭ್ಯವಿರುವ ಅನುದಾನದಲ್ಲಿ ಅಥವಾ ಸ್ವಂತ ಸಂಪನ್ಮೂಲಗಳಿಂದ ಪುರಸಭೆಯ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೌನ್ಸಿಲ್ ಅನುಮೋದನೆ ಪಡೆದು ಅನುಷ್ಠಾನಿಸಲು ಅವಕಾಶವಿರುತ್ತದೆ. ರಾಜ್ಯದ ಪುರಸಭೆಗಳ ಅಭಿವೃದ್ಧಿಗೆ ಈಗಾಗಲೇ ಸರ್ಕಾರದ ವಿವಿಧ ಯೋಜನೆಗಳಿಂದ ಅನುದಾನ ಒದಗಿಸಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುತ್ತಿದೆ. ಯೋಜನೆಯ ವಿವರಗಳು ಕೆಳಕಂಡಂತಿದೆ.<br><br>1. **ಎಸ್.ಎಫ್.ಸಿ ಮುಕ್ತನಿಧಿ/ ಕುಡಿಯುವ ನೀರು/ ವಿಶೇಷ ಅನುದಾನ:-**<br>ಪುರಸಭೆಗಳಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು 2018-19 ರಿಂದ 2020-21ನೇ ಅವಧಿಯವರೆಗೆ ಬಿಡುಗಡೆಯಾದ ಅನುದಾನದ ವಿವರವು ಈ ಕೆಳಕಂಡತಿದೆ. |

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಯೋಜನೆ | ವರ್ಷ | ಬಿಡುಗಡೆಯಾದ ಅನುದಾನ |
|---|---|---|---|
| 1 | ಎಸ್.ಎಫ್.ಸಿ ಮುಕ್ತನಿಧಿ ಅನುದಾನ | 2018-19 | 12175.85 |
| | | 2019-20 | 12747.25 |
| | | 2020-21 | 5285.40 |
| 2 | ಎಸ್.ಎಫ್.ಸಿ ಕುಡಿಯುವ ನೀರು ಅನುದಾನ | 2018-19 | 2897.90 |
| | | 2019-20 | 2068.72 |
| | | 2020-21 | 708.75 |
| 3 | ಎಸ್.ಎಫ್.ಸಿ ವಿಶೇಷ ಅನುದಾನ | 2018-19 | 3589.76 |
| | | 2019-20 | 5389.44 |
| | | 2020-21 | 4434.65 |

| | | |
|---|---|---|
| | | **2. ಸ್ವಚ್ಛ ಭಾರತ ಯೋಜನೆ:-**<br><br>ಸ್ವಚ್ಛ ಭಾರತ್ ಮಿಷನ್(ನಗರ) ಯೋಜನೆಯ ಮಾರ್ಗಸೂಚಿಗಳನ್ವಯ ವೈಯಕ್ತಿಕ ಶೌಚಾಲಯಗಳ ನಿರ್ಮಾಣ, ಸಮುದಾಯ/ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ, ಐ.ಇ.ಸಿ ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆ ಘಟಕಗಳನ್ನು ಅಭಿವೃದ್ಧಿ ಪಡಿಸಲು ಪುರಸಭೆಗಳಿಗೆ ರೂ.191.15 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.<br><br>**3. 14ನೇ ಹಣಕಾಸು ಆಯೋಗದ ಅನುದಾನ:-**<br>ರಾಜ್ಯದ ಪುರಸಭೆಗಳಿಗೆ 14ನೇ ಹಣಕಾಸು ಆಯೋಗದ ಅನುದಾನದಡಿ 5 ವರ್ಷಗಳ ಅವಧಿಗೆ (2015-16 ರಿಂದ 2019-20) ಒಟ್ಟು ಅನುದಾನ ರೂ.893.96 ಕೋಟಿ ಹಂಚಿಕೆ ಮಾಡಿ, ಅನುದಾನ ರೂ.894.15 ಕೋಟಿ ಬಿಡುಗಡೆಗೊಳಿಸಲಾಗಿದೆ<br><br>**4. 15ನೇ ಹಣಕಾಸು ಆಯೋಗದ ಅನುದಾನ:-**<br>ರಾಜ್ಯದ ಪುರಸಭೆಗಳಿಗೆ 2020-21ನೇ ಸಾಲಿನಲ್ಲಿ ಅನುದಾನ ರೂ.238.64 ಕೋಟಿಗಳನ್ನು ಹಂಚಿಕೆ ಮಾಡಿ ಬಿಡುಗಡೆಗೊಳಿಸಲಾಗಿದೆ.<br><br>2021-22ನೇ ಸಾಲಿಗೆ ರಾಜ್ಯ ಪುರಸಭೆಗಳಿಗೆ ರೂ.178.33 ಕೋಟಿ ಹಂಚಿಕೆ ಮಾಡಿ, ಮೊದಲನೆಯ ಕಂತಿನ ಅನುದಾನ ರೂ.35.66 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದೆ.<br><br>**5. ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆ:-**<br><br>ರಾಜ್ಯದ 115 ಪುರಸಭೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು 2016-17ನೇ ಸಾಲಿನಲ್ಲಿ ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿ ರೂ.629.87 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. |
| ಇ) | ಪುರಸಭೆಗಳ ಅಭಿವೃದ್ಧಿಗೆ ಸರ್ಕಾರದಿಂದ ಯಾವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ? | ಪುರಸಭೆಗಳು ಒಳಗೊಂಡಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಗರ/ ಪಟ್ಟಣಗಳ ಅಭಿವೃದ್ಧಿಗೆ ಸರ್ಕಾರವು ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br><br>1. ಎಸ್.ಎಫ್.ಸಿ ಮುಕ್ತನಿಧಿ, ಎಸ್.ಎಫ್.ಸಿ ಕುಡಿಯುವ ನೀರು ಮತ್ತು ಎಸ್.ಎಫ್.ಸಿ ವಿಶೇಷ ಅನುದಾನ.<br>2. 14ನೇ / 15ನೇ ಹಣಕಾಸು ಆಯೋಗದ ಅನುದಾನ.<br>3. ಸ್ವಚ್ಛ ಭಾರತ ಯೋಜನೆಯಡಿ ವೈಯಕ್ತಿಕ ಶೌಚಾಲಯಗಳ ನಿರ್ಮಾಣ, ಸಮುದಾಯ/ಸಾರ್ವಜನಿಕ ಶೌಚಾಲಯಗಳ ನಿರ್ಮಾಣ, ಐ.ಇ.ಸಿ ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.<br>4. ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆ |

ಕಡತ ಸಂಖ್ಯೆ:ನಅಇ 352 ಎಸ್ಎಫ್‌ಸಿ 2021

**[ಎನ್. ನಾಗರಾಜು (ಎಂ.ಟಿ.ಬಿ)]**
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು